**ದಕ್ಷಿಣ ಕನ್ನಡ ಸಹಕಾರಿ ಹಾಲು ಉತ್ಪಾದಕರ ಒಕ್ಕೂಟ ನಿಯಮಿತ.,**
**ಮಂಗಳೂರು ಡೈರಿ ಆವರಣ, ಕುಲಶೇಖರ, ಮಂಗಳೂರು –575 005**
**ದೂರವಾಣಿ ಸಂಖ್ಯೆ: (0824) 2231515, 2230986**
**Email :mddkmul@gmail.com**

**ನಂ:ದಕಹಾಒ:ಆಡಳಿತ:5615:2017-18** **ದಿನಾಂಕ: 04-11-2017**

**:ನೇಮಕಾತಿ ಪ್ರಕಟಣೆ:**

ದಕ್ಷಿಣ ಕನ್ನಡ ಸಹಕಾರಿ ಹಾಲು ಉತ್ಪಾದಕರ ಒಕ್ಕೂಟವು ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಗ್ರಾಮೀಣ ಪ್ರದೇಶದಿಂದ ಹಾಲನ್ನು ಸಂಗ್ರಹಿಸಿ, ಸಂಸ್ಕರಿಸಿ,ಉತ್ಕೃಷ್ಟ ಗುಣಮಟ್ಟದ ವಿವಿಧ ಹಾಲಿನ ಉತ್ಪನ್ನಗಳನ್ನು ತಯಾರಿಕೆ ಮಾಡಿ ಪಾಶ್ಚರೀಕರಿಸಿದ **'ನಂದಿನಿ'** ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಗ್ರಾಹಕರಿಗೆ ಸರಬರಾಜು ಮಾಡುವ ಐ.ಎಸ್.ಒ. 22000:2005 ದೃಢೀಕರಣ ಪ್ರಮಾಣಪತ್ರ ಮತ್ತು (FSSAI)ಆಹಾರ ಸುರಕ್ಷತೆ ಮತ್ತು ಸಂರಕ್ಷಣೆ ಕಾಯಿದೆ 2006, ನಿಯಮ 2011 ರನ್ವಯ ನೋಂದಣಿಯಾಗಿ ಲೈಸನ್ಸ್ ಹೊಂದಿದ ಹಾಗೂ National Dairy Development Board ವತಿಯಿಂದ "Quality Mark" ಪ್ರಮಾಣ ಪತ್ರವನ್ನು ಹಾಗೂ ರಾಷ್ಟ್ರೀಯ ಮಟ್ಟದಲ್ಲಿ "ಎಕ್ಸಲೆನ್ಸಿ" ಆವಾರ್ಡ್‌ಪಡೆದ ಪ್ರತಿಷ್ಠಿತ ಸಹಕಾರಿ ಸಂಸ್ಥೆಯಾಗಿರುತ್ತದೆ. ನಮ್ಮ ಕಾರ್ಯಾಚರಣೆಯನ್ನು ಬಲಪಡಿಸಲು **ಈ ಕೆಳಗೆ ನಮೂದಿಸಿದ ಖಾಲಿ ಇರುವ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ Onlineಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.** ಹುದ್ದೆಗಳು, ವೇತನಶ್ರೇಣಿ, ಹುದ್ದೆಗಳ ಸಂಖ್ಯೆ, ವಿದ್ಯಾರ್ಹತೆ ಮತ್ತು ಹುದ್ದೆಗಳ ಮೀಸಲಾತಿ ವರ್ಗೀಕರಣ ಇತ್ಯಾದಿ ವಿವರಗಳನ್ನು ಈ ಕೆಳಗೆ ನಮೂದಿಸಿದೆ.

## 01.ತಾಂತ್ರಿಕಅಧಿಕಾರಿ (ಡಿ.ಟಿ.) TECHNICAL OFFICER (D.T.):

**ವೇತನ ಶ್ರೇಣಿ ರೂ. 22800-43200 – ಎರಡು ಹುದ್ದೆಗಳು**

| | ಇತರೆ | ಮಹಿಳೆ |
|---|---|---|
| ಪ್ರವರ್ಗ– II-B | 1 | – |
| ಪ್ರವರ್ಗ–I | – | 1 |

**ಶೈಕ್ಷಣಿಕ ವಿದ್ಯಾರ್ಹತೆ:** ಬಿ.ಎಸ್ಸಿ (ಡಿ.ಟಿ) ಅಥವಾ ಬಿ.ಟೆಕ್ (ಡಿ.ಟೆಕ್)ಪದವೀಧರರಾಗಿರಬೇಕು.

## 02.ಡೈರಿ ಸೂಪರ್‌ವೈಸರ್‌ದರ್ಜೆ–II: DAIRY SUPERVISOR GR.II:

**ವೇತನ ಶ್ರೇಣಿ ರೂ. 17650-32000- ಒಂದು ಹುದ್ದೆ**

| | ಮಾಜಿ ಸೈನಿಕ |
|---|---|
| ಸಾಮಾನ್ಯಅರ್ಹತೆ | 1 |

**ಶೈಕ್ಷಣಿಕ ವಿದ್ಯಾರ್ಹತೆ:** ತಾಂತ್ರಿಕ ಪರೀಕ್ಷಾ ಮಂಡಳಿಯಿಂದ ಇಲೆಕ್ಟ್ರಾನಿಕ್ಸ್ ಮತ್ತು ಕಮ್ಯೂನಿಕೇಷನ್ಸ್ ಇಂಜಿನಿಯರಿಂಗ್ ವಿಷಯದಲ್ಲಿಡಿಪ್ಲೋಮಾದಲ್ಲಿತೇರ್ಗಡೆಯಾಗಿರಬೇಕು.(ಯಾವುದೇ ಮುಕ್ತ ವಿಶ್ವವಿದ್ಯಾನಿಲಯಗಳ ಮೂಲಕ ಡಿಪ್ಲೋಮಾ ಇನ್ ಇಂಜಿನಿಯರಿಂಗ್ ಮಾಡಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.)

## 03. ಲೆಕ್ಕ ಸಹಾಯಕರುದರ್ಜೆ–II: ACCOUNT ASSISTANT GR.II:

**ವೇತನ ಶ್ರೇಣಿ ರೂ.14550-26700-ಐದು ಹುದ್ದೆಗಳು**

| | ಇತರೆ | ಮಹಿಳೆ | ಗ್ರಾಮೀಣ |
|---|---|---|---|
| ಪರಿಶಿಷ್ಟ ಜಾತಿ | – | 1 | – |
| ಸಾಮಾನ್ಯಅರ್ಹತೆ | – | 1 | 1 |
| ಪ್ರವರ್ಗ– II-A | – | 1 | – |
| ಪ್ರವರ್ಗ– II-B | 1 | – | – |

**ಶೈಕ್ಷಣಿಕ ವಿದ್ಯಾರ್ಹತೆ:** ವಾಣಿಜ್ಯ ಪದವಿ (B Com) ಯಲ್ಲಿತೇರ್ಗಡೆಯಾಗಿರಬೇಕು.

**04.ಮಾರುಕಟ್ಟೆ ಸಹಾಯಕರುದರ್ಜೆ–II: MARKETING ASSISTANT GR.II:**

**ವೇತನ ಶ್ರೇಣಿ ರೂ.14550–26700–ನಾಲ್ಕು ಹುದ್ದೆಗಳು**

| | ಇತರೆ | ಮಹಿಳೆ | ಅಂಗವಿಕಲ |
|---|---|---|---|
| ಪರಿಶಿಷ್ಟ ಜಾತಿ | – | 1 | – |
| ಸಾಮಾನ್ಯ ಅರ್ಹತೆ | – | 1 | 1 |
| ಪ್ರವರ್ಗ– II-A | 1 | – | – |

**ಶೈಕ್ಷಣಿಕ ವಿದ್ಯಾರ್ಹತೆ:**B.B.M.ಅಥವಾB.Comಪದವಿಜೊತೆಗೆಗಣಕಯಂತ್ರ ನಿರ್ವಹಣೆಯ ಮೂಲಭೂತ ಅರಿವು ಹೊಂದಿರಬೇಕು. ಡಿಪ್ಲೋಮಾಇನ್‌ಕೋ–ಆಪರೇಟಿವ್ ಬಿಸಿನೆಸ್ ಮ್ಯಾನೇಜ್‌ಮೆಂಟ್ (D.C.B.M.) ಹೊಂದಿರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

**05. ಆಡಳಿತ ಸಹಾಯಕರುದರ್ಜೆ–II: ADMINISTRATIVE ASSISTANT GR.II:**

**ವೇತನ ಶ್ರೇಣಿ ರೂ. 14550–26700–ಐದು ಹುದ್ದೆಗಳು**

| | ಇತರೆ | ಮಹಿಳೆ | ಗ್ರಾಮೀಣ | ಅಂಗವಿಕಲ |
|---|---|---|---|---|
| ಪರಿಶಿಷ್ಟ ಜಾತಿ | – | 1 | – | – |
| ಸಾಮಾನ್ಯಅರ್ಹತೆ | – | 1 | 1 | 1 |
| ಪ್ರವರ್ಗ– II-A | 1 | – | – | – |

**ಶೈಕ್ಷಣಿಕ ವಿದ್ಯಾರ್ಹತೆ:**ಯಾವುದೇ ಪದವಿಯೊಂದಿಗೆಗಣಕಯಂತ್ರ ನಿರ್ವಹಣೆಯ ಮೂಲಭೂತಅರಿವು ಹೊಂದಿರಬೇಕು. ಡಿಪ್ಲೋಮಾಇನ್‌ಕೋ–ಆಪರೇಟಿವ್ ಬಿಸಿನೆಸ್ ಮ್ಯಾನೇಜ್‌ಮೆಂಟ್(D.C.B.M.)ಅಥವಾ ಬಿಸಿನೆಸ್ ಅಡ್ಮಿನಿಸ್ಟ್ರೇಷನ್‌ನಲ್ಲಿ ಸ್ನಾತಕೋತ್ತರ ವಿದ್ಯಾರ್ಹತೆ (PGPBA) ಹೊಂದಿರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

**06. ಕಿರಿಯ ಸಿಸ್ಟಂ ಆಪರೇಟರ್: JUNIOR SYSTEM OPERATOR :**

**ವೇತನ ಶ್ರೇಣಿ ರೂ.14550–26700–ಎರಡು ಹುದ್ದೆಗಳು**

| | ಮಹಿಳೆ |
|---|---|
| ಪರಿಶಿಷ್ಟ ಜಾತಿ | 1 |
| ಸಾಮಾನ್ಯಅರ್ಹತೆ | 1 |

**ಶೈಕ್ಷಣಿಕವಿದ್ಯಾರ್ಹತೆ:** ಕಂಪ್ಯೂಟರ್‌ಅಪ್ಲಿಕೇಶನ್ಸ್‌ನ ಪದವಿ (B.C.A)ಯಲ್ಲಿತೇರ್ಗಡೆಯಾಗಿರಬೇಕು.

**07.ಕೆಮಿಸ್ಟ್ ದರ್ಜೆ–II: CHEMIST GR.II :**

**ವೇತನ ಶ್ರೇಣಿ ರೂ.14550–26700–ಎರಡು ಹುದ್ದೆಗಳು**

| | ಮಹಿಳೆ |
|---|---|
| ಪರಿಶಿಷ್ಟ ಜಾತಿ | 1 |
| ಸಾಮಾನ್ಯಅರ್ಹತೆ | 1 |

__ಶೈಕ್ಷಣಿಕ ವಿದ್ಯಾರ್ಹತೆ:__ ರಸಾಯನಶಾಸ್ತ್ರ/ಗುಣನಿಯಂತ್ರಣ ವಿಷಯವನ್ನುಐಚ್ಛಿಕ ವಿಷಯವಾಗಿ ಹೊಂದಿರುವ ವಿಜ್ಞಾನ ಪದವಿ (ಬಿ.ಎಸ್.ಸಿ) ಯಲ್ಲಿತೇರ್ಗಡೆಯಾಗಿರಬೇಕು.

__ಪ್ರಮುಖ ಸೂಚನೆಗಳು:__

Online ಮೂಲಕ ಅರ್ಜಿಯನ್ನು ಸಲ್ಲಿಸಲು ಪ್ರಾರಂಭವಾಗುವ ದಿನಾಂಕ : 07-11-2017

Online ಮೂಲಕ ಅರ್ಜಿಯನ್ನು ಸಲ್ಲಿಸಲುಕೊನೆಯ ದಿನಾಂಕ : 06-12-2017

ಅರ್ಜಿ ಶುಲ್ಕವನ್ನು ಪಾವತಿಸಲುಕೊನೆಯ ದಿನಾಂಕ :07-12-2017 (ಅಂಚೆ ಕಛೇರಿಯ ಕಾರ್ಯದ ವೇಳೆಯೊಳಗೆ)

<u>ವಿಶೇಷ ಸೂಚನೆ:-</u>

- ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿದ್ದಲ್ಲಿ ಪ್ರತಿ ಹುದ್ದೆಗೂ ಪ್ರತ್ಯೇಕ ಶುಲ್ಕದೊಂದಿಗೆ ಪ್ರತ್ಯೇಕ ಅರ್ಜಿ ಸಲ್ಲಿಸತಕ್ಕದ್ದು.
- ಅರ್ಜಿಗಳನ್ನು **Online ಮೂಲಕ ಮಾತ್ರ ಸಲ್ಲಿಸತಕ್ಕದ್ದು.**
  ಖುದ್ದಾಗಿ/ ಅಂಚೆ/ಕೊರಿಯರ್ ಮೂಲಕ ಅರ್ಜಿಗಳನ್ನು ಕಳುಹಿಸಲು ಅವಕಾಶವಿರುವುದಿಲ್ಲ.
- ಅಭ್ಯರ್ಥಿಗಳು **Online ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಮೊದಲು ನೇಮಕಾತಿ ಪ್ರಕ್ರಿಯೆಯ ಪೂರ್ಣ ವಿವರಗಳನ್ನು ಮತ್ತು ನೀಡಿರುವ ಸೂಚನೆಗಳನ್ನು ಕಡ್ಡಾಯವಾಗಿ ಓದಿಕೊಳ್ಳತಕ್ಕದ್ದು.** ಸದರಿ ಸೂಚನೆಗಳನ್ವಯ ಅರ್ಜಿ ಭರ್ತಿ ಮಾಡತಕ್ಕದ್ದು.
- **Online ಮೂಲಕ ಅರ್ಜಿಯನ್ನು ಸಲ್ಲಿಸುವ ಸಂದರ್ಭದಲ್ಲಿ ಅಪ್‌ಲೋಡ್ ಮಾಡಬೇಕಾದ ಪ್ರಮಾಣಪತ್ರ/ದಾಖಲಾತಿಗಳನ್ನು ಸ್ಪಷ್ಟವಾಗಿ ಕಾಣುವಂತೆ ಮತ್ತು ಓದಲು ಸಾಧ್ಯವಾಗುವಂತೆ Scan ಮಾಡಿ ಅಪ್‌ಲೋಡ್** ಮಾಡತಕ್ಕದ್ದು.
- ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ, ಮೊಬೈಲ್ ನಂ. ಮತ್ತು ಇ-ಮೇಲ್ ಐಡಿಗಳ ಮೂಲಕವೇ ಸಂಪರ್ಕಿಸಲಾಗುವುದು.

**1. <u>ಸಾಮಾನ್ಯ ಷರತ್ತುಗಳು:</u>**

**ಸೂಚನೆ:**-ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಈ ಮೇಲಿನ ನಿಗದಿತ ವಿದ್ಯಾರ್ಹತೆಯ ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ.

**ಕನ್ನಡ ಭಾಷಾ ಜ್ಞಾನ (ಓದುವುದು ಮತ್ತು ಬರೆಯುವುದು) ಕಡ್ಡಾಯವಾಗಿರುತ್ತದೆ:** 1 ರಿಂದ 7 ಅಥವಾ 1 ರಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರಬೇಕು ಅಥವಾ 10 ನೇ ತರಗತಿಯವರೆಗೆ ಕನ್ನಡ ಭಾಷೆಯನ್ನು ಒಂದು ವಿಷಯವಾಗಿ ಅಧ್ಯಯನ ಮಾಡಿರಬೇಕು ಅಥವಾ ಕರ್ನಾಟಕ ಲೋಕಸೇವಾ ಆಯೋಗವು ನಡೆಸುವ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು. ಈ ಬಗ್ಗೆ ಅಗತ್ಯ ದಾಖಲಾತಿಯನ್ನುScan ಮಾಡಿ <u>ಕಡ್ಡಾಯವಾಗಿ</u> ಅಪ್‌ಲೋಡ್ ಮಾಡಬೇಕು.

ಸಾಮಾನ್ಯ ಅರ್ಹತೆ –ಮಹಿಳೆ, ಪ್ರವರ್ಗI-ಮಹಿಳೆಮತ್ತುಪ್ರವರ್ಗII.A- ಮಹಿಳೆ ಇವುಗಳಿಗೆ ಮೀಸಲಿಟ್ಟ ಹುದ್ದೆಗಳಿಗೆ ಆಯಾ ವರ್ಗದ ಅರ್ಹ ಮಹಿಳಾ ಅಭ್ಯರ್ಥಿಗಳು ಲಭ್ಯವಾಗದ್ದಿದ್ದಲ್ಲಿ ಅಂತಹ ರಿಕ್ತ ಸ್ಥಾನಗಳನ್ನು ಆಯಾ ವರ್ಗಕ್ಕೆ ಸೇರಿದ ಅರ್ಹ ಪುರುಷ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

ಸಾಮಾನ್ಯ ಅರ್ಹತೆ-ಮಾಜಿ ಸೈನಿಕ ಅಭ್ಯರ್ಥಿಗೆಮೀಸಲಿಟ್ಟ ಡೈರಿ ಸೂಪರ್‌ವೈಸರ್ ದರ್ಜೆ-IIಹುದ್ದೆಗೆ ಅರ್ಹ ಮಾಜಿ ಸೈನಿಕ ಅಭ್ಯರ್ಥಿಗಳಿಂದ ಯಾವುದೇ ಅರ್ಜಿ ಬಾರದಿದ್ದಲ್ಲಿ ಅಥವಾ ಸಲ್ಲಿಸಲ್ಪಟ್ಟಅರ್ಜಿಗಳು ತಿರಸ್ಕೃತಗೊಂಡಲ್ಲಿ ಅಂತಹ ಸ್ಥಾನವನ್ನು ಇತರೆ ಅರ್ಹ ಅಭ್ಯರ್ಥಿಯಿಂದ ಭರ್ತಿ ಮಾಡಲಾಗುವುದು.

ಪ್ರವರ್ಗ– I, ಪ್ರವರ್ಗ– II-A ಮತ್ತು ಪ್ರವರ್ಗ– II-B ವರ್ಗಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ, ಅಂತಹ ಹುದ್ದೆಗಳನ್ನು ಬ್ಯಾಕ್‌ಲಾಗ್ ಎಂದು ಪರಿಗಣಿಸಿ ಮುಂದಕ್ಕೆ ಕೊಂಡೊಯ್ಯಲಾಗುವುದು. ಆದ್ದರಿಂದ ಈ ಹುದ್ದೆಗಳಿಗೆ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಮೂಲವೇತನದೊಂದಿಗೆ ಒಕ್ಕೂಟದ ಸೇವಾ ನಿಯಮಗಳಲ್ಲಿ ಕಾಲಕಾಲಕ್ಕೆ ಲಭ್ಯವಿರುವ ತುಟ್ಟಿಭತ್ಯೆ, ಮನೆ ಬಾಡಿಗೆ ಭತ್ಯೆ ಮತ್ತು ಇತರ ಭತ್ಯೆಗಳನ್ನು ಪಾವತಿಸಲಾಗುವುದು. ಭವಿಷ್ಯನಿಧಿ/ಗ್ರಾಚ್ಯುಟಿ ಇತ್ಯಾದಿ ಶಾಸನಬದ್ಧ ಸೌಲಭ್ಯಗಳನ್ನು ನೀಡಲಾಗುವುದು.

ನೇಮಕಗೊಳ್ಳುವ ಅಭ್ಯರ್ಥಿಗಳನ್ನು ಒಕ್ಕೂಟದ ಕಾರ್ಯಕ್ಷೇತ್ರದ ಒಳಗೆ ಅಥವಾ ಹೊರಗೆ ಯಾವುದೇ ಘಟಕ/ ಶಿಬಿರ ಕಚೇರಿ/ ವಿಭಾಗ/ ಶಾಖೆ/ ಸ್ಥಳಗಳಲ್ಲಿ ಕರ್ತವ್ಯಕ್ಕೆ ನಿಯೋಜಿಸಬಹುದಾಗಿದೆ. ಅಲ್ಲದೆಸದರಿಯವರು ಕಾನೂನು ರೀತ್ಯಾ ಪಾಳಿಗಳಲ್ಲಿ ಕರ್ತವ್ಯ ನಿರ್ವಹಿಸುವುದು ಕಡ್ಡಾಯವಾಗಿರುತ್ತದೆ.ಕಂಪ್ಯೂಟರ್‌ನಲ್ಲಿ ಕೆಲಸ ನಿರ್ವಹಿಸುವುದು ಅನಿವಾರ್ಯವಾದ್ದರಿಂದ ಎಲ್ಲಾ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಕಂಪ್ಯೂಟರ್ ನಿರ್ವಹಣೆಯ ಮೂಲಭೂತ ಅರಿವು ಹೊಂದಿರಬೇಕು.ಲೆಕ್ಕ ಸಹಾಯಕರು ದರ್ಜೆ– II ಹುದ್ದೆಗಳಿಗೆ ನೇಮಕಗೊಳ್ಳುವ ಅಭ್ಯರ್ಥಿಗಳುTally ತಂತ್ರಾಂಶ ಮತ್ತು ನುಡಿ ತಂತ್ರಾಂಶ ಹಾಗೂ ಇತರೆ ಹುದ್ದೆಗಳಿಗೆ ನೇಮಕಗೊಳ್ಳುವ ಅಭ್ಯರ್ಥಿಗಳುಕನ್ನಡ ನುಡಿ ತಂತ್ರಾಂಶ ಬಳಕೆಯ ಪರಿಜ್ಞಾನ ಹೊಂದಿರಬೇಕು.

**2. ವಯೋಮಿತಿ:**

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಕನಿಷ್ಟ ವಯೋಮಿತಿ–18 ವರ್ಷಗಳು ಮತ್ತು ಗರಿಷ್ಟ ವಯೋಮಿತಿ: 1. ಸಾಮಾನ್ಯ ಅರ್ಹತೆ – 35 ವರ್ಷಗಳು,

2. ಪ್ರವರ್ಗ.II-A, II-B, III-A ಮತ್ತು III-B– 38 ವರ್ಷಗಳುಮತ್ತು

3. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ I– 40 ವರ್ಷಗಳು.ಗರಿಷ್ಟ ವಯೋಮಿತಿಯೊಳಗೆ ಇರುವ ಬಗ್ಗೆ ಹುಟ್ಟಿದ ದಿನಾಂಕಮತ್ತು ಮೀಸಲಾತಿ ವರ್ಗಕ್ಕೆ ಸೇರಿದ್ದಲ್ಲಿ ಆ ಬಗ್ಗೆ ಅಗತ್ಯ ಪುರಾವೆಯನ್ನು ಕಡ್ಡಾಯವಾಗಿ ಅಪ್‌ಲೋಡ್ ಮಾಡಬೇಕು. ಇಲ್ಲದಿದ್ದಲ್ಲಿ ಅರ್ಜಿಯನ್ನು ಪರಿಗಣಿಸಲಾಗುದಿಲ್ಲ.

**ವಯೋಮಿತಿ ಸಡಿಲಿಕೆ:** ಅಂಗವಿಕಲರಿಗೆ ಮತ್ತು ವಿಧವೆಯರಿಗೆ ವಯೋಮಿತಿಯಲ್ಲಿ ಗರಿಷ್ಟ 10 ವರ್ಷಗಳ ಸಡಿಲಿಕೆಇರುತ್ತದೆ. ಅಂಗವೈಕಲ್ಯವನ್ನು ಹೊಂದಿರುವ ಬಗ್ಗೆ ನಿಗದಿತ ನಮೂನೆಯಲ್ಲಿ ಪ್ರಮಾಣಪತ್ರವನ್ನು ಅಪ್‌ಲೋಡ್ ಮಾಡಬೇಕು.ವಿಧವೆಯಾಗಿದ್ದಲ್ಲಿ, ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆಯೆಂದು ಹಾಗೂ ಮರುಮದುವೆಯಾಗಿರುವುದಿಲ್ಲವೆಂಬ ಪ್ರಮಾಣಪತ್ರವನ್ನು ಅಪ್‌ಲೋಡ್ ಮಾಡಬೇಕು.ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಭಾರತೀಯ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಅಷ್ಟು ವರ್ಷಗಳುಮತ್ತು ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳುವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ. ವಯೋಮಿತಿ ಸಡಿಲಿಕೆಯ ವಿನಾಯಿತಿ/ ರಿಯಾಯಿತಿ ಸೌಲಭ್ಯ ಪಡೆಯಲಿಚ್ಛಿಸುವವರು ಈ ಬಗ್ಗೆ ಅಗತ್ಯ ಪ್ರಮಾಣಪತ್ರದದಾಖಲೆಯನ್ನು ಅಪ್‌ಲೋಡ್ ಮಾಡಬೇಕು.

**<u>3. ಶುಲ್ಕ:</u>**

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ.I, ಮಾಜಿ ಸೈನಿಕ ಮತ್ತು ಅಂಗವಿಕಲಅಭ್ಯರ್ಥಿಗಳಿಗೆ ರೂ.**250/–** **(ಅಂಚೆ ಕಛೇರಿಯ ಸೇವಾ ಶುಲ್ಕ ಒಳಗೊಂಡು )** ಮತ್ತು ಇತರೆ ಅಭ್ಯರ್ಥಿಗಳಿಗೆ ರೂ.**450/–** **(ಅಂಚೆ ಕಛೇರಿಯ ಸೇವಾ ಶುಲ್ಕ ಒಳಗೊಂಡು ) ಅರ್ಜಿಗಳನ್ನು On-line ಮೂಲಕ ಭರ್ತಿ ಮಾಡಿ ನಿಗದಿತ ಶುಲ್ಕವನ್ನು ಅಂಚೆ ಕಛೇರಿಯ ಕೆಲಸದ ವೇಳೆಯೊಳಗೆ ಕರ್ನಾಟಕ ರಾಜ್ಯದಲ್ಲಿನ ಯಾವುದೇ ಎಲೆಕ್ಟ್ರಾನಿಕ್ ಅಂಚೆ ಕಛೇರಿಗಳಲ್ಲಿ (E-payment post Office Only ) ನಿಗದಿತಅರ್ಜಿ ಶುಲ್ಕ ಪಾವತಿ ಮಾಡಬೇಕು.ಇದನ್ನು ಹೊರತುಪಡಿಸಿ ಡಿಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್, ಚೆಕ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ**

**ಅರ್ಜಿಗಳನ್ನು ತಿರಸ್ಕರಿಸಲಾಗುವುದು.** ಶುಲ್ಕ ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವೆಂದು ಘೋಷಿಸಲ್ಪಟ್ಟರೆ ಆ ದಿನಾಂಕದ ನಂತರದ ಕೆಲಸದ ದಿನವು ಕೊನೆಯ ದಿನವಾಗುವುದು.

**ಅರ್ಜಿ ಸಲ್ಲಿಸುವ ವಿಧಾನ :**

ಅಭ್ಯರ್ಥಿಗಳು online ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಈ ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ಓದಿ ತಿಳಿದುಕೊಳ್ಳತಕ್ಕದ್ದು ಮತ್ತು ಸದರಿ ಸೂಚನೆಗಳನ್ವಯ ಅರ್ಜಿ ಭರ್ತಿ ಮಾಡತಕ್ಕದ್ದು.

ಹಂತ :- 1)

ನಮ್ಮ ವೆಬ್‌ಸೈಟ್/ ಪುಟವನ್ನು ತೆರೆದಾಗ ಒಂದು ಮೆನು ಕಾಣಿಸುತ್ತದೆ. ಅದರಲ್ಲಿ HOME,RECRUITMENT NOTIFICATION, GUIDELINES,HOW TO APPLY ಮತ್ತು RECRUITMENT LOG IN ಎಂಬ ಲಿಂಕ್‌ಗಳು ಕಾಣಿಸುತ್ತವೆ. RECRUITMENT NOTIFICATION ಲಿಂಕ್‌ನಲ್ಲಿ ನೇಮಕಾತಿ ಪ್ರಕಟಣೆಯನ್ನು ನೋಡಬಹುದು. GUIDELINES ಲಿಂಕ್‌ನಲ್ಲಿ ಹುದ್ದೆಗಳ ವಿವರದ ಜೊತೆಗೆ ನೇಮಕಾತಿಯ ವಿಧಾನ ಮತ್ತು HOW TO APPLY ಲಿಂಕ್‌ನಲ್ಲಿ ಆನ್‌ಲೈನ್‌ನಲ್ಲಿ ಅರ್ಜಿ ತುಂಬುವ ಬಗ್ಗೆ ವಿವರವಾದ ಮಾಹಿತಿಯನ್ನು ಓದಬಹುದು. RECRUITMENT LOG IN ಲಿಂಕನ್ನು ಒತ್ತಿದಾಗ ಅದು ಮತ್ತೊಂದು ಟ್ಯಾಬ್‌ಗೆ ನಿಮ್ಮನ್ನು ಕರೆದೊಯ್ಯುತ್ತದೆ. ಅಲ್ಲಿ ನೀವು ಈಗಾಗಲೇ ರಿಜಿಸ್ಟರ್ ಆಗಿದ್ದರೆ, ನಿಮ್ಮ ರಿಜಿಸ್ಟರ್ಡ್-ಮೇಲ್ ಐಡಿ ಮತ್ತು ಮೊಬೈಲ್ ನಂಬರನ್ನು ದಾಖಲಿಸುವ ಮೂಲಕ ಲಾಗಿನ್ ಆಗಬಹುದು. ಇಲ್ಲದಿದ್ದರೆ ಸೈನ್ ಅಪ್ ಲಿಂಕ್ ಮುಂಖಾತರ ನಿಮ್ಮ ಹೆಸರು, ಇ-ಮೇಲ್ ವಿಳಾಸ ಮತ್ತು ಮೊಬೈಲ್ ನಂಬರನ್ನು ಹೊಸದಾಗಿ ದಾಖಲಿಸಿ ರಿಜಿಸ್ಟ್ರೇಶನ್ ಮಾಡಬಹುದು. ರಿಜಿಸ್ಟ್ರೇಶನ್ ಆದ ನಂತರ ನಿಮ್ಮ ಮೊಬೈಲ್ ನಂಬರಿಗೆ ಓಟಿಪಿ ಸಂಖ್ಯೆ ಎಸ್.ಎಂ.ಎಸ್ ಮೂಲಕ ಬರುತ್ತದೆ. ನಂತರ ಲಾಗಿನ್ ಸ್ಕ್ರೀನಿನಲ್ಲಿರುವ ಸೈನ್ ಇನ್‌ನಲ್ಲಿ ನಿಮ್ಮ ರಿಜಿಸ್ಟರ್ಡ್ ಇ-ಮೇಲ್ ಐಡಿ ಮತ್ತು ಮೊಬೈಲ್ ನಂಬರನ್ನು ಎಂಟರ್ ಮಾಡಿ ಸೈನ್ ಇನ್ ಬಟನ್ ಒತ್ತಿದಾಗ ಓಟಿಪಿಯನ್ನು ತುಂಬುವ ಬಾಕ್ಸ್ ತೆರೆಯುತ್ತದೆ. ಅಲ್ಲಿ ನಿಮಗೆ ಬಂದಿರುವ ಓಟಿಪಿಯನ್ನು ತುಂಬಿ ಮುಂದುವರೆಯುವುದು.

ಹಂತ :- 2)

ನೀವು ತುಂಬಿದ ಲಾಗಿನ್ ಮಾಹಿತಿಯು ಸರಿಯಾಗಿದ್ದಲ್ಲಿ ನಿಮ್ಮ ಗಣಕಯಂತ್ರದಲ್ಲಿ ನೇಮಕಾತಿ ನಿಬಂಧನೆಗಳು ಹಾಗೂ ಸೂಚನೆಗಳಿರುವ ಪುಟವು ತೆರೆದುಕೊಳ್ಳುತ್ತದೆ. ಈ ಪುಟದಲ್ಲಿರುವ ಮಾಹಿತಿಯನ್ನು ಅಭ್ಯರ್ಥಿಯು ಕಡ್ಡಾಯವಾಗಿ ಓದಿ ಮತ್ತು ಅಂತಿಮವಾಗಿ ನಿಯಮ ಮತ್ತು ಷರತ್ತುಗಳನ್ನು ಕೆಳಗಿನ ಚೆಕ್‌ಬಾಕ್ಸ್ ಅನ್ನು ಅದುಮುವ/ ಪ್ರೆಸ್ ಮಾಡುವ ಮೂಲಕ ಒಪ್ಪಿಕೊಳ್ಳತಕ್ಕದ್ದು, ನಂತರ continue ಬಟನ್ ಅನ್ನು ಒತ್ತಬೇಕು.

ಹಂತ:- 3)

ಮುಂದಿನ ಪುಟದಲ್ಲಿ ನೇಮಕಾತಿ ಮಾಡಲಿರುವ ಹುದ್ದೆಯ ವಿವರಗಳು ಇರುತ್ತದೆ. ಹಾಗೂ APPLY ಬಟನ್ ಸಹ ಇರುತ್ತದೆ. ಅಭ್ಯರ್ಥಿಯು ತನ್ನ ವಿದ್ಯಾಭ್ಯಾಸಕ್ಕೆ ಸರಿಹೊಂದುವ ಹುದ್ದೆಯ ಮುಂದಿರುವ APPLY ಬಟನ್ ಅನ್ನು ಒತ್ತಿದರೆ ಮುಂದಿನ ಪುಟವು(ಅರ್ಜಿ) ತೆರೆದುಕೊಳ್ಳುತ್ತದೆ. ಅರ್ಜಿಯಲ್ಲಿರುವ ಎಲ್ಲಾ ಮಾಹಿತಿಯನ್ನು ಕಡ್ಡಾಯವಾಗಿ ತುಂಬಬೇಕು.

ಹಂತ:- 4)

ಅಭ್ಯರ್ಥಿಯು ಪದವಿಯನ್ನು ವಾರ್ಷಿಕ ಪರೀಕ್ಷೆಯ ಮುಖಾಂತರ ಪಾಸು ಮಾಡಿದಲ್ಲಿ year/semester ಅಲ್ಲಿ year ಅನ್ನು select ಮಾಡಬೇಕು ಮತ್ತು ಕೆಳಗಿನ Enter Marks ವಿಭಾಗದಲ್ಲಿ ಪ್ರತಿ ವಾರ್ಷಿಕ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ನಮೂದಿಸತಕ್ಕದ್ದು.

ಅಭ್ಯರ್ಥಿಯು ಪದವಿಯನ್ನುಸೆಮಿಸ್ಟರ್ ಪದ್ದತಿಯ ಪರೀಕ್ಷೆಯ ಮುಖಾಂತರ ಪಾಸು ಮಾಡಿದ್ದಲ್ಲಿ ಅಲ್ಲಿ year/semester ಅನ್ನು select ಮಾಡಬೇಕು. ಮತ್ತು ಕೆಳಗಿನ Enter Marks ವಿಭಾಗದಲ್ಲಿ ಪ್ರತೀ ಸೆಮಿಸ್ಟರ್

ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ನಮೂದಿಸತಕ್ಕದ್ದು. ಅದಲ್ಲದೇ ಸೆಮಿಸ್ಟರ್ ಮತ್ತು ಗ್ರೇಡ್ ಪರೀಕ್ಷೆಯ ಮುಖಾಂತರ ಪಾಸು ಮಾಡಿದ್ದಲ್ಲಿ scheme ಅಲ್ಲಿ grade ಅನ್ನು online ಅರ್ಜಿಯಲ್ಲಿ ತುಂಬಬೇಕು.

ಪುಟದಲ್ಲಿ ಮೂಡಿಬರುವ ಅರ್ಜಿಯಲ್ಲಿ ಅಭ್ಯರ್ಥಿಯು ಮಾಹಿತಿಗಳನ್ನು ತುಂಬಿ, ಎಲ್ಲಾ ಸರ್ಟಿಫಿಕೇಟ್ ಹಾಗೂ ಮಾರ್ಕ್ಸ್ ಕಾರ್ಡುಗಳಲ್ಲಿ ಸ್ವಯಂ ದೃಢೀಕರಿಸಿ(self attested) ಸ್ಕಾನ್ ಮಾಡಿ ಅಪ್‌ಲೋಡ್ ಮಾಡತಕ್ಕದ್ದು.

ಅರ್ಜಿ ನಮೂನೆಯಲ್ಲಿ ಕೇಳಿರುವ ಎಲ್ಲಾ ಮಾಹಿತಿಗಳನ್ನು ತುಂಬಿದ್ದೇನೆಂದು ಖಚಿತಪಡಿಸಿಕೊಂಡ ನಂತರ submit ಬಟನ್ ಒತ್ತಬೇಕು. ಒಬ್ಬ ಅರ್ಭ್ಯಥಿಯು ಒಂದು ಹುದ್ದೆಯ ಅರ್ಜಿಗೆ submit ಬಟನ್ ಒತ್ತುವ ಮೊದಲು ಎಷ್ಟು ಬಾರಿ ಬೇಕಾದರು ಲಾಗಿನ್ ಆಗಿ ಮಾಹಿತಿಯನ್ನು ಬದಲಾಯಿಸಬಹುದು. ಒಮ್ಮೆ submit ಬಟನ್ ಒತ್ತಿದ ಮೇಲೆ ಯಾವುದೇ ರೀತಿಯಿಂದಲೂ ಆ ಅರ್ಜಿಯ ಮಾಹಿತಿಗಳನ್ನು ಬದಲಾಯಿಸಲು ಅವಕಾಶವಿಲ್ಲ.

ಅರ್ಜಿಯನ್ನು ಆನ್‌ಲೈನ್ ಮೂಲಕ submit ಮಾಡಿದ ನಂತರ **ಪೋಸ್ಟ್ ಆಫೀಸ್ ಚಲನ್ ಡೌನ್‌ಲೋಡ್ ಮಾಡಿಕೊಂಡು ಯಾವುದೇ ವಿದ್ಯುನ್ಮಾನ ಅಂಚೆ ಕಚೇರಿಯಲ್ಲಿ (ಇ–ಪೇಮೆಂಟ್ ಇರುವ ಅಂಚೆ ಕಚೇರಿ) ಅರ್ಜಿ ಮೊತ್ತವನ್ನು ತುಂಬಬಹುದು. ತದನಂತರ ಕನ್‌ಫರ್ಮೇಷನ್ ಎಸ್.ಎಂ.ಎಸ್. ಬಂದ ಮೇಲೆ ಪುನ: ಲಾಗಿನ್ ಆಗಿ ನಿಮ್ಮ ಅರ್ಜಿಯನ್ನು ಡೌನ್‌ಲೋಡ್ ಮಾಡಿ ಇಟ್ಟುಕೊಳ್ಳಬಹುದು (ಅರ್ಜಿಯನ್ನು ಪೋಸ್ಟ್ ಮೂಲಕ ಕಳುಹಿಸುವುದು ಅವಶ್ಯಕವಿರುವುದಿಲ್ಲ.)**

- Save :ಈ ಬಟನ್ ಮುಖಾಂತರ ಅಭ್ಯರ್ಥಿಯು ಅರ್ಜಿಯನ್ನು ಎಷ್ಟು ಬಾರಿ ಬೇಕಾದರೂ Save ಮಾಡಬಹುದು.(Allows multiple edit)
- Submit: ಈ ಬಟನ್ ಮುಖಾಂತರ ಅಭ್ಯರ್ಥಿಯುಸಂಪೂರ್ಣವಾಗಿ ಭರ್ತಿ ಮಾಡಿದ/ ದಾಖಲಾತಿಯನ್ನು ಲಗತ್ತಿಸಿದ ಅರ್ಜಿಯನ್ನು ಒಂದೇ ಸಲ Submit ಮಾಡಬಹುದು.(once submitted no alteration)

ಅಡಕಗಳ ಫೈಲ್ ಫಾರ್ಮಾಟ್

- ಭಾವಚಿತ್ರ : ಕಲರ್ : ಸೈಜ್ 100 ಕೆಬಿ : ಜೆಪಿಜಿ ಅಥವಾ ಜೆಪೆಗ್ (92ಡಿಪಿಐ)
- ಇತರೆ ಅಡಕಗಳು : ಕಪ್ಪು ಬಿಳುಪು : ಸೈಜ್ 2 ಎಂಬಿ: ಜೆಪಿಜಿ ಅಥವಾ ಪಿಡಿಎಫ್(150ಡಿಪಿಐ)
- ಯಾವುದೇ ವರ್ಷದ/ ಸೆಮಿಸ್ಟರ್‌ನ ಅಂಕಪಟ್ಟಿಗಳು (Marks Cards) ಒಂದಕ್ಕಿಂತ ಹೆಚ್ಚಿದ್ದಲ್ಲಿ ಅಂತಹ ಅಂಕಪಟ್ಟಿಗಳನ್ನು ಒಂದೇ ಪಿ.ಡಿ.ಎಫ್. ಫಾರ್ಮಟ್‌ನಲ್ಲಿ ಬರುವಂತೆ ಮಾಡಿ ಅಪ್‌ಲೋಡ್ ಮಾಡುವುದು.

**Online ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಯಾವುದಾದರೂ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ (Help line)No.8884402530ಅನ್ನು (ಬೆಳಗ್ಗೆ 9.00 ರಿಂದ ಸಂಜೆ 6.00 ಘಂಟೆಯವರೆಗೆ) ಸಂಪರ್ಕಿಸಹುದು.**

**ಅಭ್ಯರ್ಥಿಗಳು** ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ಅದರ ಒಂದು ಪ್ರತಿಯನ್ನು **ಕಡ್ಡಾಯವಾಗಿ ಡೌನ್‌ಲೋಡ್ ಮಾಡಿಕೊಂಡು ಅದರೊಂದಿಗೆ ಶುಲ್ಕ ಪಾವತಿಯ ಚಲನ್ ಇವುಗಳನ್ನು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೆ ಸುರಕ್ಷಿತವಾಗಿ ತೆಗೆದಿಟ್ಟುಕೊಂಡಿರತಕ್ಕದ್ದು.**

**4. ಅರ್ಹತಾ ಷರತ್ತುಗಳು:**

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಅಭ್ಯರ್ಥಿಗಳು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವವಿರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

ಇ) ದೈಹಿಕವಾಗಿ ಅನರ್ಹರಾಗಿದ್ದರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಒಕ್ಕೂಟವು ಕಾಯ್ದಿರಿಸಿಕೊಂಡಿದೆ.

**5. ಆಯ್ಕೆ ವಿಧಾನ :**

ಅಭ್ಯರ್ಥಿಗಳು ಅರ್ಜಿಯಲ್ಲಿ ನೀಡಿರುವ ಮಾಹಿತಿ/ ಸಲ್ಲಿಸಿರುವ ದಾಖಲಾತಿಗಳ ಆಧಾರದಲ್ಲಿ ಅಭ್ಯರ್ಥಿಗಳ ಕಿರುಪಟ್ಟಿಯನ್ನು ಸಿದ್ದಪಡಿಸಿ (Shortlisted)ಹುದ್ದೆಗಳಿಗೆ ನಿಗದಿಪಡಿಸಿದ ಅರ್ಹತಾದಾಯಕ ಪರೀಕ್ಷೆಯಲ್ಲಿ (Qualifyng Exam) ಅಭ್ಯರ್ಥಿಗಳು ಗಳಿಸಿದ ಶೇಕಡಾವಾರು ಅಂಕಗಳಆಧಾರದ ಮೇಲೆ ಗರಿಷ್ಠ ಅಂಕ ಗಳಿಸಿದ ಅಭ್ಯರ್ಥಿಗಳನ್ನುಪ್ರತಿ ಹುದ್ದೆಗೆ 1:20 ರಅನುಪಾತದಲ್ಲಿ ಲಿಖಿತ ಪರೀಕ್ಷೆಗೆ ಆಹ್ವಾನಿಸಿ, 200 ಅಂಕಗಳನ್ನು ಒಳಗೊಂಡ ಲಿಖಿತ ಪರೀಕ್ಷೆ ನಡೆಸಲಾಗುವುದು.ಲಿಖಿತ ಪರೀಕ್ಷೆಯು ವಿವರಣಾತ್ಮಕ ಮತ್ತು/ ಅಥವಾ ವಸ್ತುನಿಷ್ಠ ಬಹು ಆಯ್ಕೆ ಮಾದರಿಯ ಪತ್ರಿಕೆಗಳನ್ನು ಹೊಂದಿರುತ್ತದೆ.

| ಪತ್ರಿಕೆ | ವಿಷಯ | ಅಂಕಗಳು | ಪರೀಕ್ಷಾ ಅವಧಿ | ಪರೀಕ್ಷಾ ವಿಧಾನ |
|---|---|---|---|---|
| **ಪತ್ರಿಕೆ 1** | ಕನ್ನಡ ಭಾಷೆ | 50 | 1 1/2 ಗಂಟೆಗಳ ಅವಧಿ | ವಿವರಣಾತ್ಮಕ ಮತ್ತು/ ಅಥವಾ ವಸ್ತುನಿಷ್ಠ ಬಹು ಆಯ್ಕೆಯ ಪತ್ರಿಕೆ Descriptive type & / or Obejective Multiple choice type |
| | ಆಂಗ್ಲ ಭಾಷೆ | 25 | | |
| | ಸಾಮಾನ್ಯ ಜ್ಞಾನ | 25 | | |
| **ಪತ್ರಿಕೆ 2** | ಸಹಕಾರ ವಿಷಯ | 50 | 1 1/2 ಗಂಟೆಗಳ ಅವಧಿ | ವಿವರಣಾತ್ಮಕ ಮತ್ತು/ ಅಥವಾ ವಸ್ತುನಿಷ್ಠ ಬಹು ಆಯ್ಕೆಯ ಪತ್ರಿಕೆ Descriptive type & / or Obejective Multiple choice type |
| | ಭಾರತ ಸಂವಿಧಾನ | 25 | | |
| | ದ.ಕ ಸಹಕಾರಿ ಹಾಲು ಒಕ್ಕೂಟದ ಉದ್ದೇಶ ಮತ್ತು ಕಾರ್ಯ ಚಟುವಟಿಕೆಗಳಿಗೆ ಸಂಬಂಧಿಸಿದ ವಿಷಯ | 25 | | |

ಸಹಕಾರಕ್ಕೆ ಸಂಬಂಧಪಟ್ಟ ವಿಷಯವು ಈ ಕೆಳಕಂಡ ಪಠ್ಯಕ್ರಮ ಒಳಗೊಂಡಿರುತ್ತದೆ.

i. ಸಹಕಾರ ಚಳುವಳಿಯ ಇತಿಹಾಸ.

ii. ದೇಶದ ಅರ್ಥ ವ್ಯವಸ್ಥೆಯಲ್ಲಿ ಸಹಕಾರ ಸಂಘಗಳ ಪಾತ್ರ.

iii. ಸಹಕಾರ ಸಂಘಗಳ ರಚನೆ,ಆಡಳಿತ,ಕಾರ್ಯನಿರ್ವಹಣೆ ಮತ್ತು ಲೆಕ್ಕಪತ್ರ ನಿರ್ವಹಣೆ.

iv. ಸಹಕಾರ ತತ್ವಗಳು.

v. ಸಹಕಾರ ಸಂಘಗಳ ಕುರಿತಾದ ಭಾರತ ಸಂವಿಧಾನದ 97 ನೇ ತಿದ್ದುಪಡಿಮತ್ತುಸಹಕಾರ ಸಂಘಗಳ ಕಾನೂನು.

ಲಿಖಿತ ಪರೀಕ್ಷೆಯಲ್ಲಿ ಗಳಿಸುವ ಶೇಕಡಾವಾರು ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು ಪ್ರತಿ ಹುದ್ದೆಗೆ 1:5 ರಅನುಪಾತದಲ್ಲಿ ಮೌಖಿಕ ಸಂದರ್ಶನಕ್ಕೆ ಆಹ್ವಾನಿಸಿ ಶೇಕಡ 15 ರಷ್ಟು ಅಂಕಗಳಿಗೆ ಮೌಖಿಕ ಸಂದರ್ಶನವನ್ನು ಕೈಗೊಳ್ಳಲಾಗುವುದು.ಲಿಖಿತ ಪರೀಕ್ಷೆಯಲ್ಲಿ ಗಳಿಸುವ ಅಂಕಗಳನ್ನು ಶೇ. 85ಕ್ಕೆ ಇಳಿಸಿಅದಕ್ಕೆ ಸಂದರ್ಶನದಲ್ಲಿ ಗಳಿಸುವ ಅಂಕಗಳನ್ನು ಕೂಡಿಸಿ ಪ್ರಾಪ್ತವಾಗುವ ಒಟ್ಟು ಅಂಕಗಳ ಆಧಾರದ ಮೇಲೆ ತಯಾರಿಸುವ ಅಭ್ಯರ್ಥಿಗಳ ಅರ್ಹತಾ ಪಟ್ಟಿಯ ಆಧಾರದ ಮೇಲೆ ಮೀಸಲಾತಿ ನಿಯಮಗಳನ್ನು ಅನುಸರಿಸಿ

ಅರ್ಹ ಅಭ್ಯರ್ಥಿಗಳನ್ನು ಅಂತಿಮವಾಗಿ ಆಯ್ಕೆ ಮಾಡಲಾಗುವುದು.**ಅಭ್ಯರ್ಥಿಗಳ ಅರ್ಹತೆಯ ಬಗ್ಗೆ ಒಕ್ಕೂಟದ ನೇಮಕಾತಿ ಸಮಿತಿಯ ನಿರ್ಣಯವೇ ಅಂತಿಮವಾಗಿದ್ದು ಇದಕ್ಕೆ ಅಭ್ಯರ್ಥಿಯು ಬದ್ಧರಾಗಿರಬೇಕು.**

ಈ ಹುದ್ದೆಗಳ ಲಿಖಿತ ಪರೀಕ್ಷೆ ಮತ್ತುಮೌಖಿಕ ಸಂದರ್ಶನವನ್ನು ಮಂಗಳೂರಿನಲ್ಲಿ ನಡೆಸಲಾಗುವುದು.ಲಿಖಿತ ಪರೀಕ್ಷೆ ಮತ್ತು ಮೌಖಿಕ ಸಂದರ್ಶನಕ್ಕೆ ಪ್ರವೇಶ ಪತ್ರ/ ಕರೆಪತ್ರ ಪಡೆಯುವ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ  ಹಾಜರಾಗಬೇಕು. ಆಯ್ಕೆಯಾದ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷಾ/ ಮೌಖಿಕ ಸಂದರ್ಶನದ ದಿನಾಂಕವನ್ನು ತಿಳಿಸಲಾಗುವುದು.
ಅಭ್ಯರ್ಥಿಗಳು ಲಿಖಿತ ಪರೀಕ್ಷೆ ಮತ್ತು ಸಂದರ್ಶನಕ್ಕೆ  ಹಾಜರಾದಾಗ ಅವರಿಗೆ ಕಳುಹಿಸಿದ ಲಿಖಿತ ಪರೀಕ್ಷೆ ಪ್ರವೇಶ ಪತ್ರ/ ಸಂದರ್ಶನ ಕರೆಪತ್ರ ಹಾಗೂ ಅವರ ಭಾವಚಿತ್ರವಿರುವ ಮೂಲ ಗುರುತಿನಚೀಟಿ (ಚುನಾವಣಾ ಐಡಿ/ ಆಧಾರ್ ಕಾರ್ಡ್/ಡ್ರೈವಿಂಗ್ ಲೈಸನ್ಸ್/ಪಾನ್ ಕಾರ್ಡ್/ ಪಾಸ್‌ಪೋರ್ಟ್) ಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು. **ಅಭ್ಯರ್ಥಿಯು ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಹತೆ ಹೊಂದಿದ್ದ ಪಕ್ಷದಲ್ಲಿ, ಯಾವುದಾದರೂ ಒಂದು ಹುದ್ದೆಗೆ ಮಾತ್ರ ಪರಿಗಣಿಸಿ, ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು.**

## 6.ಕಡ್ಡಾಯವಾಗಿScan ಮಾಡಿ ಅಪ್‌ಲೋಡ್‌ಮಾಡಬೇಕಾದ ಪ್ರಮಾಣಪತ್ರಗಳು/ದಾಖಲೆಗಳು–

### i.ಜಾತಿ / ಮೀಸಲಾತಿ ಪ್ರಮಾಣಪತ್ರಗಳು:

ಅಭ್ಯರ್ಥಿಗಳು ಅವಶ್ಯವಿರುವ ಎಲ್ಲಾ ಮೀಸಲಾತಿ ಪ್ರಮಾಣಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯದಿನಾಂಕದೊಳಗೆ ಈ ಕೆಳಗೆ ನಮೂದಿಸಿರುವನಮೂನೆಗಳಲ್ಲಿಯೇ ಪಡೆದಿಟ್ಟುಕೊಂಡಿರತಕ್ಕದ್ದು:

ಅ) ಪರಿಶಿಷ್ಟಜಾತಿಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು:– ನಮೂನೆ ‘ ಡಿ ’ಯಲ್ಲಿ

ಆ)ಪ್ರವರ್ಗ–I ರ ಅಭ್ಯರ್ಥಿಗಳು – ನಮೂನೆ ‘ ಇ ’ ಯಲ್ಲಿ

ಇ)ಪ್ರವರ್ಗ-II.A, II.B, III.A ಮತ್ತುIII.Bಮೀಸಲಾತಿಗೆ ಸೇರಿದ ಅಭ್ಯರ್ಥಿಗಳು:– ನಮೂನೆ ‘ಎಫ್’ಯಲ್ಲಿಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣಪತ್ರವನ್ನು ಸಂಬಂಧಿತ ತಹಸೀಲ್ದಾರ್‌ರವರಿಂದ ಅಂದರೆ ತಹಶೀಲ್ದಾರ್‌ರವರ ಸಹಿ ಮತ್ತು ಮೊಹರು ಅಥವಾ ಬಾರ್ ಕೋಡ್, ಹಾಲೋಗ್ರಾಮ್ ಮತ್ತು ವಾಟರ್‌ಮಾರ್ಕ್‌ನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮೀಸಲಾತಿ ಪ್ರಮಾಣಪತ್ರಗಳು ರದ್ದಾಗುವವರೆಗೂ ಚಾಲ್ತಿಯಲ್ಲಿರುವುದರಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿಪಡಿಸಿದ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. ಇತರೆ ಹಿಂದುಳಿದ ವರ್ಗಗಳ (ಪ್ರವರ್ಗ.I,II-A, II-B, III-A ಮತ್ತುIII-B) ಮೀಸಲಾತಿ ಪ್ರಮಾಣಪತ್ರಗಳು ಐದುವರ್ಷಗಳು ಚಾಲ್ತಿಯಲ್ಲಿರುತ್ತವೆ. ಅಭ್ಯರ್ಥಿಗಳು ಪಡೆದಿರುವ ಪ್ರಮಾಣಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು. ಸಂದರ್ಶನಕ್ಕೆ ಅರ್ಹರಾದಾಗ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು.  ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಪರಿಗಣಿಸಲಾಗುವುದಿಲ್ಲ. ಈ ಪ್ರಮಾಣಪತ್ರಗಳ ನಮೂನೆಗಳನ್ನು ನೇಮಕಾತಿ ಪ್ರಕಟಣೆಯ ಕೊನೆಯಲ್ಲಿ ನೀಡಲಾಗಿದೆ. ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣಪತ್ರಗಳನ್ನು ತಿರಸ್ಕರಿಸಲಾಗುವುದು.

### ii.ಗ್ರಾಮೀಣ ಅಭ್ಯರ್ಥಿ:

ಗ್ರಾಮೀಣ ಮೀಸಲಾತಿಯಡಿ ಅರ್ಜಿ ಸಲ್ಲಿಸುವಅಭ್ಯರ್ಥಿಗಳು 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾದಲ್ಲಿ ಮಾತ್ರ ಗ್ರಾಮೀಣ ಮೀಸಲಾತಿಯನ್ನು ಪಡೆಯಲು ಅರ್ಹರು.ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣಪತ್ರವನ್ನು ನಮೂನೆ–2ರಲ್ಲಿ ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೇಲು ರುಜುವಿನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು.

ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ.I,II-A, II-B, III-A ಮತ್ತುIII-B ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ನಮೂನೆ –2 ರ ಗ್ರಾಮೀಣ ಮೀಸಲಾತಿ ಪ್ರಮಾಣಪತ್ರದ ಜೊತೆಗೆ ಕ್ರಮವಾಗಿ ನಮೂನೆ 'ಡಿ' ಅಥವಾ'ಇ' ಅಥವಾ 'ಎಫ್'ಪ್ರಮಾಣಪತ್ರವನ್ನು ಹಾಗೂ ಸಾಮಾನ್ಯ ಅರ್ಹತೆಯಅಭ್ಯರ್ಥಿಗಳುನಮೂನೆ –2 ರ ಗ್ರಾಮೀಣ ಮೀಸಲಾತಿ ಪ್ರಮಾಣಪತ್ರದ ಜೊತೆಗೆ ನಮೂನೆ–1 ರಲ್ಲಿ ಅವರು ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಸಂಬಂಧಿತ ತಹಶೀಲ್ದಾರರಿಂದ ಪ್ರಮಾಣಪತ್ರವನ್ನು ಪಡೆದು ಕಡ್ಡಾಯವಾಗಿ ಸಲ್ಲಿಸಬೇಕು.

ಸಂದರ್ಶನಕ್ಕೆ ಅರ್ಹರಾದಾಗ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣಪತ್ರದಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಅಭ್ಯರ್ಥಿಗಳ ನೇರ ಮೀಸಲಾತಿ ಪ್ರಮಾಣಪತ್ರಗಳುತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೆ ಸಹ ಅನರ್ಹರಾಗುತ್ತಾರೆ.) ಈ ಪ್ರಮಾಣಪತ್ರಗಳ ನಮೂನೆಗಳನ್ನುನೇಮಕಾತಿ ಪ್ರಕಟಣೆಯ ಕೊನೆಯಲ್ಲಿ ನೀಡಲಾಗಿದೆ.

**iiiಮಾಜಿ ಸೈನಿಕರು:**

ಮಾಜಿ ಸೈನಿಕರು ಮತ್ತು ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗಹತರಾದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗುತ್ತಾರೆ.ಆದರೆಕುಟುಂಬದವರಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.ಮಾಜಿ ಸೈನಿಕರ ಮೀಸಲಾತಿ ಕೋರುವ ಅಭ್ಯರ್ಥಿಗಳು ನಿಯಮಾನುಸಾರ ಆ ಮೀಸಲಾತಿಗೆ ಅರ್ಹರೇ? ಎಂಬುವುದನ್ನು ಹತ್ತಿರದ ಜಿಲ್ಲಾ ಸೈನಿಕ್ ಬೋರ್ಡ್‌ನಿಂದ ತಿಳಿದುಕೊಂಡು ಮೀಸಲಾತಿಯನ್ನು ಕೋರುವುದು. ಸೂಕ್ತ ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿ ಹೊಂದಿದ ಬಗೆಗಿನ ಪ್ರಮಾಣಪತ್ರವನ್ನು **Scan ಮಾಡಿ ಅಪ್‌ಲೋಡ್ ಮಾಡಬೇಕು**.

**iv ಅಂಗವಿಕಲ:**

ಅಂಗವಿಕಲರಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಂಗವೈಕಲ್ಯತೆಯ ಶೇ.40ಕ್ಕೆ ಕಡಿಮೆಯಿಲ್ಲದಿರುವ ಅಂಗವಿಕಲ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣಪತ್ರವನ್ನು ದಿನಾಂಕ: 19.11.2005ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ 115 ಸೆನೆನಿ 2005ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ, ಅಂಗವಿಕಲತೆಯ ಬಗ್ಗೆ ಜಿಲ್ಲಾಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣಪತ್ರಗಳನ್ನು ಪರಿಗಣಿಸುವುದಿಲ್ಲ. ಸರ್ಕಾರದ ಆದೇಶ ಸಂಖ್ಯೆಸಿಆಸುಇ74ಸೆನೆನಿ 2006, ದಿನಾಂಕ: 30.10.2007ರಲ್ಲಿ ಅಂಧ/ ದೃಷ್ಟಿಮಾಂದ್ಯ ಅಂಗವಿಕಲತೆಯ ಮೀಸಲಾತಿ ಕೋರಿದ್ದಲ್ಲಿ, ನೇಮಕಾತಿ ಸಮಿತಿಯುವೈದ್ಯಕೀಯ ಸಮಿತಿಯನ್ನು ರಚಿಸಿ, ವೈದ್ಯಕೀಯ ಪರೀಕ್ಷೆಯಲ್ಲಿ ಅಂತಹ ಅಭ್ಯರ್ಥಿಗಳ ಅಂಧ/ ದೃಷ್ಟಿಮಾಂದ್ಯತೆಯನ್ನು ಪರೀಕ್ಷಿಸಿ ಖಚಿತಪಡಿಸಿಕೊಳ್ಳಬೇಕೆಂದು ನಿರ್ದಿಷ್ಟಪಡಿಸಿದ್ದು, ಅದರಂತೆ ನೇಮಕಾತಿ ಸಮಿತಿಯಪರೀಕ್ಷಾ ಪೂರ್ವ ಅಥವಾ ಪರೀಕ್ಷೋತ್ತರದ ನಂತರ ನಡೆಸುವ ವೈದ್ಯಕೀಯ ಪರೀಕ್ಷೆಯ ಅಂತಿಮ ವರದಿಗೆ ಅಂಧ/ ದೃಷ್ಟಿಮಾಂದ್ಯ ಅಭ್ಯರ್ಥಿಗಳ ಮೀಸಲಾತಿಯು ಬದ್ಧವಾಗಿರುತ್ತದೆ.

ಮೇಲೆ ವಿವರಿಸಿದಂತೆ ಮೀಸಲಾತಿಗೆ **ಸಂಬಂಧಿಸಿದ ಅಗತ್ಯ ನಮೂನೆಗಳು, ಇತ್ಯಾದಿ ಎಲ್ಲಾ ದಾಖಲಾತಿಗಳನ್ನು Scan ಮಾಡಿ ಅಪ್‌ಲೋಡ್ ಮಾಡಬೇಕು**.

**v.ವಿದ್ಯಾರ್ಹತೆ:**

ತಾಂತ್ರಿಕ ಅಧಿಕಾರಿ (ಡಿ.ಟಿ.) ಹುದ್ದೆಗಳಿಗೆSSLC ಮತ್ತು PUC ಪ್ರಮಾಣಪತ್ರಗಳೊಂದಿಗೆಬಿ.ಎಸ್ಸಿ (ಡಿ.ಟಿ) ಅಥವಾ ಬಿ.ಟೆಕ್ (ಡಿ.ಟೆಕ್) ಪದವಿಯ ವಿದ್ಯಾರ್ಹತೆಗೆ ಸಂಬಂಧಿಸಿದ ಎಲ್ಲಾ ನಾಲ್ಕು ವರ್ಷಗಳ/ ಎಂಟು ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಮತ್ತು ಘಟಿಕೋತ್ಸವ/ ಘಟಿಕೋತ್ಸವ ನಡೆಯದ್ದಿದಲ್ಲಿ ತಾತ್ಕಾಲಿಕ ಪದವಿ ಪ್ರಮಾಣಪತ್ರ ಇವುಗಳನ್ನು ಕಡ್ಡಾಯವಾಗಿ ಹೊಂದಿರಲೇಬೇಕು.

ಡೈರಿ ಸೂಪರ್‌ವೈಸರ್ ದರ್ಜೆ–II ಹುದ್ದೆಗೆ SSLC ಪ್ರಮಾಣಪತ್ರದೊಂದಿಗೆ ಇಲೆಕ್ಟ್ರಾನಿಕ್ಸ್ ಮತ್ತು ಕಮ್ಯೂನಿಕೇಷನ್ಸ್ ಇಂಜಿನಿಯರಿಂಗ್ ವಿಷಯದಲ್ಲಿ ಡಿಪ್ಲೋಮಾ ವಿದ್ಯಾರ್ಹತೆಗೆ ಸಂಬಂಧಿಸಿದ ಎಲ್ಲಾ ಮೂರು ವರ್ಷಗಳ/ ಆರು ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಮತ್ತು ಘಟಿಕೋತ್ಸವ/ ಘಟಿಕೋತ್ಸವ ನಡೆಯದ್ದಿದಲ್ಲಿ ತಾತ್ಕಾಲಿಕಡಿಪ್ಲೋಮಾಪ್ರಮಾಣಪತ್ರ ಇವುಗಳನ್ನು ಕಡ್ಡಾಯವಾಗಿ ಹೊಂದಿರಲೇಬೇಕು.

ಲೆಕ್ಕ ಸಹಾಯಕರು ದರ್ಜೆ– II, ಮಾರುಕಟ್ಟೆ ಸಹಾಯಕರು ದರ್ಜೆ– II, ಆಡಳಿತ ಸಹಾಯಕರು ದರ್ಜೆ– II, ಕಿರಿಯ ಸಿಸ್ಟಂ ಆಪರೇಟರ್ ಮತ್ತು ಕೆಮಿಸ್ಟ್‌ದರ್ಜೆ– IIಹುದ್ದೆಗಳಿಗೆ SSLC ಮತ್ತು PUC ಪ್ರಮಾಣಪತ್ರಗಳೊಂದಿಗೆ ಹುದ್ದೆಗಳಿಗೆ ನಿಗದಿಪಡಿಸಿದ ಪದವಿಯ ವಿದ್ಯಾರ್ಹತೆಗೆ ಸಂಬಂಧಿಸಿದ ಎಲ್ಲಾ ಮೂರು ವರ್ಷಗಳ/ ಆರು ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಮತ್ತು ಘಟಿಕೋತ್ಸವ/ ಘಟಿಕೋತ್ಸವ ನಡೆಯದ್ದಿದಲ್ಲಿ ತಾತ್ಕಾಲಿಕ ಪದವಿ ಪ್ರಮಾಣಪತ್ರ ಇವುಗಳನ್ನು ಕಡ್ಡಾಯವಾಗಿಹೊಂದಿರಲೇಬೇಕು.

ಆಯಾ ವಿಶ್ವವಿದ್ಯಾನಿಲಯಗಳಿಂದ ಪಡೆದ ಘಟಿಕೋತ್ಸವ ಪ್ರಮಾಣಪತ್ರವನ್ನು (Convocation Certificate) Online ಅರ್ಜಿಯೊಂದಿಗೆ ಕಡ್ಡಾಯವಾಗಿ ಅಪ್‌ಲೋಡ್ ಮಾಡಬೇಕು. ವಿಶ್ವವಿದ್ಯಾನಿಲಯಗಳಲ್ಲಿ ಘಟಿಕೋತ್ಸವ ನಡೆಯದೇ ಇದ್ದ ಪಕ್ಷದಲ್ಲಿ ತಾತ್ಕಾಲಿಕ ಪ್ರಮಾಣಪತ್ರವನ್ನು (Provisional Degree/ Diploma Certificate) ಪಡೆದು ಕಡ್ಡಾಯವಾಗಿ ಅರ್ಜಿಯೊಂದಿಗೆ ಅಪ್‌ಲೋಡ್ ಮಾಡಬೇಕು. ವಿಶ್ವವಿದ್ಯಾನಿಲಯಗಳಲ್ಲಿ ಘಟಿಕೋತ್ಸವ ನಡೆದಿದ್ದು, ಘಟಿಕೋತ್ಸವ ಪ್ರಮಾಣಪತ್ರ ಪಡೆಯದಿದ್ದರೆ ತಾತ್ಕಾಲಿಕ ಪ್ರಮಾಣಪತ್ರವನ್ನು ಪರಿಗಣಿಸಲಾಗುವುದಿಲ್ಲ. ತಾತ್ಕಾಲಿಕ ಪ್ರಮಾಣಪತ್ರವು ಘಟಿಕೋತ್ಸವ ನಡೆಯುವವರೆಗೆ ಮಾತ್ರ ಊರ್ಜಿತದಲ್ಲಿರುತ್ತದೆ. ಆಯಾ ಕಾಲೇಜುಗಳಿಂದ ನೀಡುವ ಘಟಿಕೋತ್ಸವ ಪ್ರಮಾಣಪತ್ರವನ್ನು ಪರಿಗಣಿಸಲಾಗುವುದಿಲ್ಲ. ತಾತ್ಕಾಲಿಕ ಪ್ರಮಾಣಪತ್ರವನ್ನು ಸಲ್ಲಿಸುವ ಅಭ್ಯರ್ಥಿಗಳು ಆಯಾ ಕಾಲೇಜುಗಳಿಂದ ಅಥವಾ ವಿಶ್ವವಿದ್ಯಾನಿಲಯಗಳಿಂದ ಘಟಿಕೋತ್ಸವ ನಡೆದಿರುವುದಿಲ್ಲವೆಂಬ ಬಗ್ಗೆ ದೃಢೀಕರಣ ಪತ್ರವನ್ನು ಪಡೆದು ಅಪ್‌ಲೋಡ್ ಮಾಡಬೇಕು.

ಮೇಲೆ ವಿವರಿಸಿದಂತೆ ಹುದ್ದೆಗಳಿಗೆ ನಿಗದಿಪಡಿಸಿದ ವಿದ್ಯಾರ್ಹತೆಗೆ **ಸಂಬಂಧಿಸಿದ ಎಲ್ಲಾ ಅಂಕಪಟ್ಟಿಗಳು ಮತ್ತು ಘಟಿಕೋತ್ಸವ/ ಘಟಿಕೋತ್ಸವ ನಡೆಯದ್ದಿದಲ್ಲಿ ತಾತ್ಕಾಲಿಕ ಪದವಿ ಪ್ರಮಾಣಪತ್ರ ಇತ್ಯಾದಿ ದಾಖಲಾತಿಗಳನ್ನು Scan ಮಾಡಿ ಅಪ್‌ಲೋಡ್ ಮಾಡಬೇಕು.**

**vi.ಸೇವೆಯಲ್ಲಿರುವ ಮತ್ತು ಅನುಮತಿ ಪಡೆದಿರುವ ಬಗ್ಗೆ ನಿರಾಕ್ಷೇಪಣ ಪ್ರಮಾಣಪತ್ರ**

ಈಗಾಗಲೇ ಸರ್ಕಾರಿ/ ಅರೆ ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಅರ್ಜಿಯಲ್ಲಿರುವ ನಿಗಧಿತ ಅಂಕಣವನ್ನು ತುಂಬತಕ್ಕದ್ದು ಹಾಗೂ ಅವರ ಸೇವಾ ಪ್ರಮಾಣಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿಸಲ್ಲಿಸಲು ಸಂಬಂಧಿತ ನೇಮಕಾತಿ ಪ್ರಾಧಿಕಾರದಿಂದ ಅನುಮತಿ ಪಡೆದಿರುವ ಬಗ್ಗೆ ನಿಗಧಿತ ನಮೂನೆಯಲ್ಲಿ ಪ್ರಮಾಣಪತ್ರವನ್ನು ಪಡೆದಿಟ್ಟುಕೊಂಡು ಅದನ್ನು **Scan ಮಾಡಿ ಅಪ್‌ಲೋಡ್ ಮಾಡಬೇಕು.**

**vi.ಹುದ್ದೆಗೆ ನಿಗದಿಪಡಿಸಿದ ಶುಲ್ಕವನ್ನು ಕರ್ನಾಟಕ ರಾಜ್ಯದಲ್ಲಿನ ಯಾವುದೇ ಎಲೆಕ್ಟ್ರಾನಿಕ್ ಅಂಚೆ ಕಛೇರಿ ಮೂಲಕ ಪಾವತಿಸಿ ಚಲನ್‌ನ ಒಂದು ಪ್ರತಿಯನ್ನು ಅಭ್ಯರ್ಥಿಯು ಕಡ್ಡಾಯವಾಗಿ ಇಟ್ಟುಕೊಳ್ಳತಕ್ಕದ್ದು.**

**viii**.ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣಪತ್ರ /ಶಾಲೆಯ ವರ್ಗಾವಣೆ ಪ್ರಮಾಣಪತ್ರ/ ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.(extract of cumulative record)ವನ್ನು Scan ಮಾಡಿ ಅಪ್‌ಲೋಡ್‌ಮಾಡಬೇಕು.

**ix. Online** ಅರ್ಜಿ ನಮೂನೆಯಲ್ಲಿ ನಿಗದಿತ ಅಳತೆಯ ಇತ್ತೀಚಿನ ಪಾಸ್‌ಪೋರ್ಟ್ ಭಾವಚಿತ್ರವನ್ನು ಹಾಗೂ ನಿಗದಿತ ಅಳತೆಯ ಸಹಿಯನ್ನು ನೀಡಿರುವ ಸೂಚನೆಗಳಂತೆ ಅಪ್‌ಲೋಡ್‌ಮಾಡಬೇಕು.

**x.**ಆಧಾರ್ ಕಾರ್ಡ್‌ನ ಪ್ರತಿಯನ್ನು ಕಡ್ಡಾಯವಾಗಿಅಪ್‌ಲೋಡ್ ಮಾಡಬೇಕು.

ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ ಇತ್ಯಾದಿಗಳ ಬಗ್ಗೆ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ಎಲ್ಲಾ ಅಗತ್ಯ ದಾಖಲಾತಿ/ ಪ್ರಮಾಣಪತ್ರಗಳನ್ನು ಅರ್ಜಿ ಸಲ್ಲಿಸುವ ಸಂದರ್ಭದಲ್ಲಿಯೇ ಕಡ್ಡಾಯವಾಗಿ ಅಪ್‌ಲೋಡ್ ಮಾಡಬೇಕು.

**7ಪರೀಕ್ಷಾರ್ಥ ಅವಧಿ:**

ಆಯ್ಕೆಗೊಂಡ ಅಭ್ಯರ್ಥಿಗಳನ್ನು ಪ್ರಾರಂಭದಲ್ಲಿ **ಎರಡು ವರ್ಷಗಳ** ಪರೀಕ್ಷಾರ್ಥ ಅವಧಿಗೆ ನೇಮಕಾತಿ ಮಾಡ ಲಾಗುವುದು. ಅವಶ್ಯವಿದ್ದಲ್ಲಿ ಪರೀಕ್ಷಾರ್ಥ ಅವಧಿಯನ್ನು ವಿಸ್ತರಿಸಲಾಗುವುದು. ಪರೀಕ್ಷಾರ್ಥ ಅವಧಿಯಲ್ಲಿ ಅಭ್ಯರ್ಥಿಗಳ ಸೇವೆ ತೃಪ್ತಿಕರವಾಗಿದ್ದಲ್ಲಿ ಮಾತ್ರ ಸೇವೆಯನ್ನು ಖಾಯಂಗೊಳಿಸಲಾಗುವುದು.

**8. ದುರ್ನಡತೆ:**

**ವಿದ್ಯಾರ್ಹತೆಗೆ ಸಂಬಂಧಿಸಿದ ದಾಖಲೆಗಳನ್ನು ಸಂಬಂಧಪಟ್ಟ ಇಲಾಖೆಗೆ ಅಧಿಕೃತ/ನೈಜತೆ (Genuine/ Authentic)ಪರಿಶೀಲನೆಗೆ ಕಳುಹಿಸಲಾಗುವುದು. ಒಂದು ವೇಳೆ ಸದರಿ ದಾಖಲೆಗಳು ಸುಳ್ಳು ಎಂದು ತಿಳಿದು ಬಂದಲ್ಲಿ ಯಾವುದೇ ಸೂಚನೆ ನೀಡದೇ ಅರ್ಜಿದಾರರನ್ನು ಸೇವೆಯಿಂದ ವಜಾ ಮಾಡಲಾಗುವುದು ಮತ್ತು ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು.**

**ಮೀಸಲಾತಿ ಕುರಿತಾದ ದಾಖಲೆಗಳನ್ನುಸಂಬಂಧಪಟ್ಟ ಇಲಾಖೆಗೆ ಸಿಂಧುತ್ವ ಪರಿಶೀಲನೆಗೆ ಕಳುಹಿಸಲಾಗುವುದು. ಒಂದು ವೇಳೆ ಸದರಿ ದಾಖಲೆಸುಳ್ಳು ಎಂದು ತಿಳಿದು ಬಂದಲ್ಲಿ ಯಾವುದೇ ಸೂಚನೆ ನೀಡದೇ ಅರ್ಜಿದಾರರನ್ನು ಸೇವೆಯಿಂದ ವಜಾ ಮಾಡಲಾಗುವುದು ಮತ್ತು ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು.**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಹೊಂದಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಮಾಹಿತಿ/ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಕಂಡುಬಂದಲ್ಲಿ ಹಾಗೂ ಒಕ್ಕೂಟದಿಂದ ನೀಡಲಾದ ಯಾವುದೇ ಸೂಚನೆಗಳನ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು/ಅವಳು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ ಒಕ್ಕೂಟವು ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಸಂದರ್ಶನಕ್ಕೆ ಆಹ್ವಾನಿಸಲ್ಪಡುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.

ಸಹಿ:

**ವ್ಯವಸ್ಥಾಪಕ ನಿರ್ದೇಶಕರು.**

**<u>ಅನುಬಂಧ-7</u>**

**(ಪ.ಜಾ /ಪ.ಪಂ.ಕ್ಕೆ ಸೇರಿದಅಭ್ಯರ್ಥಿಗಳಿಗೆಮಾತ್ರ)**

**ನಮೂನೆ -ಡಿ**

**(ನಿಯಮ 3ಎ (2) (3) ನೋಡಿ)**

**ಅನುಸೂಚಿತ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ**

**ಪ್ರಮಾಣ ಪತ್ರ**

........................................................ ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ................................ ಜಿಲ್ಲೆಯ / ವಿಭಾಗದ ............................................ ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ ................................. ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ .................................. ಇವರು ಅನುಸೂಚಿತ ಜಾತಿ/ ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ/ ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಿದೆ.

ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ತಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)

ಸಂವಿಧಾನ
ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962
ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967

ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ/ಬುಡಕಟ್ಟುಗಳ ಆದೇಶ 1988
ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ ಶ್ರೀಮತಿ/ ಕುಮಾರಿ * ........................................................ ಮತ್ತು /ಅಥವಾ ಅವನ* /ಅವಳ* ಕುಟುಂಬವು ..........................................................................ರಾಜ್ಯ/ ಕೇಂದ್ರಾಡಳಿತ ಪ್ರದೇಶದ ............................................................. ಜಿಲ್ಲಾ/ವಿಭಾಗದ .......................................ಗ್ರಾಮ/ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ.......................................................

ಸ್ಥಳ :

ದಿನಾಂಕ: ತಹಶೀಲ್ದಾರ್.........................................

ಪದನಾಮ
ಕಛೇರಿಯ ಮೊಹರಿನೊಂದಿಗೆ

ರಾಜ್ಯ / ಕೇಂದ್ರಾಡಳಿತಪ್ರದೇಶ*

* ಅನ್ವಯವಾಗದಿರುವಪದಗಳನ್ನು ದಯವಿಟ್ಟು ಬಿಟ್ಟು ಬಿಡಿ/ಹೊಡೆದು ಹಾಕಿ

ಸೂಚನೆ: ಇಲ್ಲಿ ಉಪಯೋಗಿಸಿದ 'ಸಾಮಾನ್ಯ ನಿವಾಸಿಗಳು' ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ: ಬಿಸಿ 12028/2/76– ಎಸ್‌ಸಿಟಿ–1 ಗೃಹ ಮಂತ್ರಾಲಯ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ) ಪತ್ರ ಸಂಖ್ಯೆ:13–2–74 ಇಎಸ್‌ಟಿ (ಎಸ್‌ಸಿಟಿ) ದಿ ನಾಂಕ: 05.08.1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

**(ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ– ಇ**

**(ನಿಯಮ 3ಎ (2) (3) ನೋಡಿ)**

ಹಿಂದುಳಿದ ವರ್ಗಗಳಿಗೆ (ಪ್ರವರ್ಗ–1) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

ಗ್ರಾಮ / ಪಟ್ಟಣದ / ನಗರ

ನಿವಾಸಿಯಾದ ಶ್ರೀ / ಶ್ರೀಮತಿ ಇವರ ಮಗ

/ ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ ಇವರು ಹಿಂದುಳಿದ
ವರ್ಗಗಳ (ಪ್ರವರ್ಗ) ಜಾತಿಯ
ಉಪಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರ್

ದಿನಾಂಕ: ತಾಲ್ಲೂಕು

ಕಛೇರಿಯ ಮೊಹರು

**(ಪ್ರವರ್ಗ – 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಎಫ್**

(ನಿಯಮ 3ಎ (2) (3)ನ್ನು ನೋಡಿ)

**ಹಿಂದುಳಿದ ವರ್ಗಗಳಿಗೆ (2ಎ, 2ಬಿ. 3ಎ, 3ಬಿ) ಸೇರಿದ ಅಭ್ಯರ್ಥಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ**

ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ / ಕುಮಾರಿ ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು / ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ:ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002 ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರೀಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1 ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು;

**ಅಥವಾ**

ಸಾರ್ವಜನಿಕ ವಲಯ ಉದ್ಯಮಯಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ;

**ಅಥವಾ**

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ.6000–12000/– ಪ್ರಾರಂಭಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು;

**ಅಥವಾ**

ಆತನ / ಅಕೆಯ ತಂದೆ ತಾಯಿ/ ಪೋಷಕರು / ಪತ್ನಿ / ಪತಿಯ ಆದಾಯವು ಎರಡು ಲಕ್ಷಮೀರುವುದಿಲ್ಲವೆಂದು;

**ಅಥವಾ**

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತನ / ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕ / ಪತ್ನಿ / ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಶ್ರೀ/ಶ್ರೀಮತಿ/ ಕುಮಾರಿ ಇವರು ಜಾತಿಗೆ ಸೇರಿದ ಉಪಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ (2ಎ, 2ಬಿ, 3ಎ, 3ಬಿ)ಕ್ಕೆ ಸೇರಿರುತ್ತಾರೆ.

ಸ್ಥಳ : ತಹಶೀಲ್ದಾರ್

ದಿನಾಂಕ: ತಾಲ್ಲೂಕು

ಕಛೇರಿಯ ಮೊಹರು

ಸೂಚನೆ:

1) ಸರ್ಕಾರದ ಆದೇಶ ಸಂಖ್ಯೆ: ಹಿಂವಕ 148 ಬಿಸಿಎ 2015, ದಿನಾಂಕ: 04–06–2015ರಂತೆ ಹಿಂದುಳಿದ ವರ್ಗಗಳ ಪ್ರವರ್ಗ–2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗಳಿಗೆ ಅನ್ವಯಿಸುವಂತೆ ಕೆನೆಪದರಕ್ಕೆ ನಿಗದಿಪಡಿಸಿರುವ ಅಭ್ಯರ್ಥಿಯ ಮತ್ತು ಅವರ ತಂದೆ–ತಾಯಿ, ಪೋಷಕರ ವಾರ್ಷಿಕ ಒಟ್ಟು ಆದಾಯ ಮಿತಿಯನ್ನು (Gross Annual Income) ರೂ. 4.50 ಲಕ್ಷಗಳಿಂದ ರೂ. 6.00 ಲಕ್ಷಗಳಿಗೆ ಹೆಚ್ಚಿಸಲಾಗಿದೆ. ಆದುದರಿಂದ, ಮೀಸಲಾತಿ ಪ್ರಮಾಣಪತ್ರವನ್ನು ನೀಡುವ ಅಧಿಕೃತ ಅಧಿಕಾರಿಯು ದಿನಾಂಕ: 04–06– 2015ರ ಸರ್ಕಾರಿ ಆದೇಶದಲ್ಲಿನ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ನೀಡತಕ್ಕದ್ದು.

2) ಈ ಮೇಲೆ ಹೇಳಲಾದ ಸರ್ಕಾರಿ ಆದೇಶದಲ್ಲಿನ ಅಂಶಗಳನ್ನು ಗಮನದಲ್ಲಿಟ್ಟುಕೊಂಡೇ ಸದರಿ ಮೀಸಲಾತಿಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಅದರಂತೆ ಜಾತಿ/ ಮೀಸಲಾತಿ ಪ್ರಮಾಣ ಪತ್ರಗಳನ್ನು ಮಾಡಿಸಲು ಸೂಚಿಸಿದೆ.

# ನಮೂನೆ- 1

ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು
ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ
(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

ಇವರಿಗೆ:

ತಹಶೀಲ್ದಾರರು

ತಾಲ್ಲೂಕು
ಜಿಲ್ಲೆ

ಮಾನ್ಯರೆ,

ಶ್ರೀ / ಶ್ರೀಮತಿ ಎಂಬುವವರ ಮಗ / ಮಗಳು/ ಪತಿ/ ಪತ್ನಿ ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :

   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :
4. ಅಭ್ಯರ್ಥಿಯ ತಂದೆ/ ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ :
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು

   ಪ್ರಾಥಮಿಕ

   ಮಾಧ್ಯಮಿಕ
   ಪ್ರೌಢ
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:

   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು
9. ಆದಾಯ ತೆರಿಗೆ ಪಾವತಿದಾರರೇ?
10. ಸಂಪತ್ತು ತೆರಿಗೆ ಪಾವತಿದಾರರೇ?
11. ಮಾರಾಟ ತೆರಿಗೆ ಪಾವತಿದಾರರೇ?

## ಪ್ರಮಾಣೀಕೃತ ಘೋಷಣೆ

**ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ / ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.**

ಸ್ಥಳ: ತಮ್ಮ ವಿಧೇಯ
ದಿನಾಂಕ: (ಅಭ್ಯರ್ಥಿಯ ಸಹಿ)

**ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣಿಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗುರುತ್ತೇನೆ**

**ಸ್ಥಳ:** **ತಂದೆ/ತಾಯಿ/ಪೋಷಕರ ಸಹಿ**
**ದಿನಾಂಕ:** **(ತಂದೆ/ತಾಯಿ ಜೀವಂತವಿಲ್ಲದಿದ್ದರೆ)**
**(ಹೆಂಡತಿ/ಗಂಡ/ಇವರ ಸಹಿ)**

**ಸ್ಥಳೀಯ ಇಬ್ಬರು ಸಾಕ್ಷಿದಾರರು**

**ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.**

**ಸಕ್ಷಿದಾರರ ಸಹಿ** **1)**

**(ಪೂರ್ಣ ವಿಳಾಸದೊಂದಿಗೆ)** **2)**

**ಪರಿಶೀಲನಾ ಪ್ರಮಾಣ ಪತ್ರ**

**1. ಶ್ರೀ/ಶ್ರೀಮತಿ ಎಂಬುವವರ ಮಗ/ ಮಗಳು/ ಪತಿ/ ಪತ್ನಿ ಶ್ರೀ/ಶ್ರೀಮತಿ/ಕುಮಾರಿ ಎಂಬುವವರು ಕರ್ನಾಟಕ ರಾಜ್ಯದ ಜಿಲ್ಲೆಯ ವಿಭಾಗ ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.**

**2. ಶ್ರೀ/ಶ್ರೀಮತಿ/ಕುಮಾರಿ ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ** (Creamy Layer) **ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.**

**ಸ್ಥಳ :** **ತಹಶೀಲ್ದಾರ್**

**ದಿನಾಂಕ:** **ತಾಲೂಕು**
**ಕಛೇರಿಯ ಮೊಹರು**

ಸೂಚನೆ–1 : ಇದರಲ್ಲಿ ಉಪಯೋಗಿಸಲಾದ 'ಸಾಮಾನ್ಯ ನಿವಾಸಿ' ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.

ಸೂಚನೆ–2: ಪರಿಶೀಲನಾ ಪ್ರಮಾಣ ಪತ್ರನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಮೇಲುಸ್ತರ (Creamy Layer) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರನೀಡತಕ್ಕದ್ದು

# ನಮೂನೆ – 2

## ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ರವರ ಮಗ/ಮಗಳು/ಪತಿ/ಪತ್ನಿ/ ಶ್ರೀ/ಶ್ರೀಮತಿ/ಕುಮಾರಿ ಜಿಲ್ಲೆ ತಾಲ್ಲೂಕು ಗ್ರಾಮದಲ್ಲಿ ವಾಸವಾಗಿರುವ ಇವರು ಒಂದನೇ ತರಗತಿಯಿಂದ ತರಗತಿಯವರೆಗೆ ಜಿಲ್ಲೆ ತಾಲ್ಲೂಕು ಪಟ್ಟಣ ಶಾಲೆಯಲ್ಲಿ ವ್ಯಾಸಂಗ ಮಾಡಿ ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿ ಒಂದು ದೊಡ್ಡ ನಗರ ಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಮೇಲು ರುಜು                                                            ಸಹಿ
ಕ್ಷೇತ್ರ ಶಿಕ್ಷಣ ಅಧಿಕಾರಿ                                                  ಮುಖ್ಯೋಪಾಧ್ಯಾಯರ
ಸಹಿ
ಕಛೇರಿಯ ಮೊಹರು                                                       ಮತ್ತು ಸಂಸ್ಥೆಯ
ಮೊಹರು

ಸ್ಥಳ :
ದಿನಾಂಕ :

ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೇನೆನಿ 2005, ದಿನಾಂಕ: 19.11.2005

## CERTIFICATE FOR THE PERSONS WITH DISABILITIES

This is to certify that Sri / Smt / Kum…………………………………………………
son/wife/daughter of Shri ………………………………………….. …………………
Age ……..………………… old, male/female, Registration No ………………………… is a case of ……………………….. He / She is physically disabled/visual disabled/speech & hearing disabled and has …………………….. % (……………………percent) permanent (physical impairment visual impairment speech & hearing impairment) in relation to his / her ……………………………

Note : 1. This condition is progressive/non-progressive/likely to improve/not likely to improve. *

2. Re-assessment is not recommended/is recommended after a period of ………………… months/years. *

* Strike out which is not applicable

(Recent Attested Photograph showing the disability affixed here)

| | | |
|---|---|---|
| Sd/- | Sd/- | Sd/- |
| (Doctor) | (Doctor) | (Doctor) |
| (Seal) | (Seal) | (Seal) |

Countersigned by the
Medical Superintendent CMO/Head
of Hospital (with seal)

Signature / Thumb impression
of the disabled person

ಕಛೇರಿ ಮೊಹರು:
ಇಲಾಖೆ:

**GOVERNMENT OF KARNATAKA**
**DEPARTMENT OF SAINIK WELFARE AND RESETTLEMENT**

**Office of the Deputy Director**
Department of Sainik Welfare & Resettlement (Karnataka)

No. Date:

## CERTIFICATE

This is to certify that Shri/Ssmt/Kum..................................................is an applicant for ...............................in Karnataka is the spouse/son/daughter of No.....................Rank...........
Name .....................................................who died/was permanently disabled while in service according to the certificate issued by Defense Authority. He died/was permanently disabled on ....................

Home address of the individual at the time of joining Defense Service as per the records is:

.................................................................
..................................................................

Place: Signature of the Deputy Director

Date: Department of Sainik Welfare & Resettlement
District ---------------------

**<u>ರಾಜ್ಯ ಹಾಗೂ ಕೇಂದ್ರ ಸರ್ಕಾರಿ ನೌಕರರು ಸಲ್ಲಿಸಬೇಕಾದ ನಿರಾಕ್ಷೇಪಣ ಪ್ರಮಾಣ ಪತ್ರ</u>**

ಶ್ರೀ/ಶ್ರೀಮತಿ.................................................................ಆದ ಇವರು ರಾಜ್ಯ/ ಕೇಂದ್ರ ಸರ್ಕಾರದಲ್ಲಿ ........................................ (ಪದನಾಮ) .............................................ಇಲಾಖೆಯಲ್ಲಿ ಖಾಯಂ/ ತಾತ್ಕಾಲಿಕ ಹುದ್ದೆಯನ್ನು ದಿನಾಂಕ:............................. ರಿಂದ ..................................ರವರೆಗೆ ಹೊಂದಿರುವರು.

ಇವರು.......................................................................................................ಹುದ್ದೆಯ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅನುಮತಿ ನೀಡಿದೆ.

ನೇಮಕಾತಿ ಪ್ರಾಧಿಕಾರಿಯವರ ಸಹಿ ಮತ್ತು ಮೊಹರು

ದಿನಾಂಕ:

ಸ್ಥಳ:

## CERTIFICATE TO BE FURNISHED BY THE STATE/CENTRAL GOVT. SERVANTS

Certified that Sri/Smt . . . . . . . . . . . . . . . . . . . . . . . . . . . . . . . . . . . . . . . . . . . . . .holds a Permanent / temporary post under the State/Central Govt as . . . . . . . . . . . . . . (Designation) in the Dept. of . . . . . . . . . . . . . . . . . . . . . . . . . . . . . . . . . . . . . . . . . . from .. . . . . . . . . . . . . . . . .to . . . . . . . . . . . . . . . . He/She is permitted to apply for the post of . . . . . . . . . . . . . . . . . . . . . . . . . . . .

Signature of the Appointment Authority with Seal

Date:

Place: